# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ : 82 (771)
2. ಸದಸ್ಯರ ಹೆಸರು : ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 10.03.02026
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಬಳ್ಳಾರಿ ಜಿಲ್ಲೆಯಲ್ಲಿನ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿದೆ; ಈ ಕಾಮಗಾರಿಯನ್ನು ಯಾವಾಗ ಪ್ರಾರಂಭ ಮಾಡಲಾಯಿತು;</td><td>ಬಳ್ಳಾರಿ ವಿಮಾನ ನಿಲ್ದಾಣವನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವ (PPP) ಅಡಿ Build Own Transfer (BoT) ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಮೆ|| ಮಾರ್ಗ್ ಶ್ರೀ ಕೃಷ್ಣದೇವರಾಯ ಏರ್‌ಪೋರ್ಟ್ ಪ್ರೈ. ಲಿಮಿಟೆಡ್, ಚೆನ್ನೈ ಸಂಸ್ಥೆಗೆ (M/s. MARG Sri Krishnadevaraya Airport Pvt. Ltd.) ದಿನಾಂಕ: 03.08.2010ರಂದು Letter of Award ಅನ್ನು ನೀಡಲಾಗಿರುತ್ತದೆ. ಆದರಂತೆ, ಸದರಿ ಸಂಸ್ಥೆಯೊಂದಿಗೆ ದಿನಾಂಕ: 06.08.2010ರಂದು ಯೋಜನಾ ಅಭಿವೃದ್ಧಿ ಒಪ್ಪಂದ (Project Development Agreement) ಕ್ಕೆ ಸಹಿ ಹಾಕಲಾಗಿರುತ್ತದೆ.<br><br>ಒಪ್ಪಂದದ ಪ್ರಕಾರ, ಬಳ್ಳಾರಿಯಲ್ಲಿ ವಿಮಾನ ನಿಲ್ದಾಣದ ಅಭಿವೃದ್ಧಿಗಾಗಿ ಸುಮಾರು 900 ಎಕರೆ ಭೂಮಿಯನ್ನು ಮೆ|| ಮಾರ್ಗ್ ಶ್ರೀ ಕೃಷ್ಣದೇವರಾಯ ಏರ್‌ಪೋರ್ಟ್ ಪ್ರೈ. ಲಿಮಿಟೆಡ್, ಚೆನ್ನೈ ಸಂಸ್ಥೆಗೆ ಹಸ್ತಾಂತರಿಸಬೇಕಾಗಿತ್ತು ಹಾಗೂ ವಿಮಾನ ನಿಲ್ದಾಣವನ್ನು 24 ತಿಂಗಳುಗಳ ಒಳಗೆ ವಿಮಾನ ನಿಲ್ದಾಣದ ಕಾರ್ಯಚರಣೆಯನ್ನು ಸದರಿ ಸಂಸ್ಥೆಯು ಪ್ರಾರಂಭಿಸಬೇಕಾಗಿತ್ತು. ಆದರೆ, ಈ ಸಂಸ್ಥೆಯು ಯಾವುದೇ ಕಾಮಗಾರಿಗಳನ್ನು ಪ್ರಾರಂಭಿಸದೇ ಇದ್ದುದರಿಂದ ಸಂಸ್ಥೆಯೊಂದಿಗಿನ ಒಪ್ಪಂದವನ್ನು ರದ್ದುಗೊಳಿಸಲು ಹಾಗೂ EPC ಮಾದರಿಯಲ್ಲಿ ವಿಮಾನ ನಿಲ್ದಾಣವನ್ನು ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ (KSIIDC) ಮೂಲಕ ಅಭಿವೃದ್ಧಿಪಡಿಸಲು ದಿನಾಂಕ: 16.11.2022ರಂದು ಆದೇಶಿಸಲಾಗಿರುತ್ತದೆ.<br><br>ಪ್ರಸ್ತುತ ಯೋಜನೆಗೆ ಸಂಬಂಧಿಸಿದಂತೆ ವಿಸ್ತೃತ ಯೋಜನಾ ವರದಿ (DPR) ಸಿದ್ಧಪಡಿಸಲು ಸಮಾಲೋಚಕರನ್ನು ನೇಮಿಸುವ ಹಂತದಲ್ಲಿದೆ.</td></tr>
<tr><td>(ಆ)</td><td>ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು;</td><td rowspan="2">ವಿಮಾನ ನಿಲ್ದಾಣದ ವಿಸ್ತೃತ ಯೋಜನೆಗಾಗಿ ಸಮಾಲೋಚಕರನ್ನು ನೇಮಿಸುವ ಹಂತದಲ್ಲಿರುತ್ತದೆ. ವಿಸ್ತೃತ ಯೋಜನಾ ವರದಿಯು ಪೂರ್ಣಗೊಂಡ ನಂತರ ಈ ಬಗ್ಗೆ ಪರಿಶೀಲಿಸಲಾಗುವುದು.</td></tr>
<tr><td>(ಇ)</td><td>ವಿಮಾನ ನಿಲ್ದಾಣ ಕಾಮಗಾರಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಅವುಗಳಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ಮತ್ತು ಉಳಿದಿರುವ ಕಾಮಗಾರಿ ಯಾವ ಹಂತದಲ್ಲಿವೆ? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)</td></tr>
</table>

**ಸಂಖ್ಯೆ: ಮೂಅಇ 51 ರಾಅವಿ 2026**

(ಎಂ.ಬಿ. ಪಾಟೀಲ)
**ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ**
**ಮೂಲಸೌಲಭ್ಯ ಅಭಿವೃದ್ಧಿ ಸಚಿವರು**